*

**ಓಎಸ್ ನಂಃ 1/2023**

**ಪಿಡಬ್ಲೂಃ**

**<u>ಸಾಕ್ಷಿಗೆ ದಿನಾಂಕ 05-02-2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು</u>**

**<u>ಮುಖ್ಯ ವಿಚಾರಣೆ ವಾದಿ ಪರ ಶ್ರೀ.ಬಿ.ಎನ್.ಎಸ್. ವಕೀಲರಿಂದ</u>**

ನಾನು ನನ್ನ ಸಾಕ್ಷ್ಯವನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದ ವಿಷಯಗಳು ಸತ್ಯ ಮತ್ತು ನಿಜ ಇರುತ್ತದೆ ಆದ್ದರಿಂದ ಸದರಿ ನನ್ನ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಬೇಕಾಗಿ ಪ್ರಾರ್ಥಿಸುತ್ತೇನೆ. ನಾನು ಈ ಕೆಳಗಿನ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತ್ತಿದ್ದೇನೆ.

ದಾವಾ ಆಸ್ತಿಯ ಋಣಭಾರ ಪತ್ರವನ್ನು ಹಾಜರುಪಡಿಸಿದ್ದು ನಿಪಿ-1 ಎಂದು, ದಿಃ 05.07.1979ರ ದಾವಾ ಆಸ್ತಿಯ ಖರೀದಿ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 2 ಎಂದು ಗುರುತಿಸಲಾಯಿತು. ನಿಪಿ-2 ರೊಂದಿಗಿರುವ ದಾವಾ ಆಸ್ತಿಯ ನಕಾಶೆಯ ದೃಢೀಕೃತ ನಕಲನ್ನು ನಿಪಿ-3 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರಿದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಸಮಯ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ. ಹೇ . ಕೇ. ಸರಿ ಇದೆ.

ಸಿವಿಲ್ ನ್ಯಾಯಾಧೀಶರು,

ಚಿತ್ತಾಪೂರ.